# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 280
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ(ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 12-07-2018
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

| | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; | ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ:161. |
| ಆ | ಈ ಕಾಲೇಜುಗಳಿಗೆ ಖಾಯಂ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ; | ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಿಗೆ ಕಾಲೇಜು ಶಿಕ್ಷಣ ಇಲಾಖೆಯು ಹಂತ ಹಂತವಾಗಿ ಹಸ್ತಾಂತರ ಮಾಡಿದ ಹುದ್ದೆಗಳನ್ನು ಮಾತ್ರ ನಿಯಮಾನುಸಾರ ಭರ್ತಿ ಮಾಡಿ ಅನುಮೋದನೆ ನೀಡಲಾಗಿದೆ. |
| ಇ | ಖಾಯಂ ಉಪನ್ಯಾಸಕರು ಹಾಗೂ ಪ್ರಾಂಶುಪಾಲರು ಇದ್ದಾರೆಯೇ; ಇದ್ದಲ್ಲಿ ಕಾಲೇಜುವಾರು ವಿವರ ನೀಡುವುದು; | ಕಾಲೇಜು ಶಿಕ್ಷಣ ಇಲಾಖೆಯಿಂದ ಹಸ್ತಾಂತರಗೊಂಡು ಹಾಗೂ ಇಲಾಖೆಯಿಂದ ಅನುಮತಿ ಪಡೆದು ಅನುಮೋದನೆಗೊಂಡ ಉಪನ್ಯಾಸಕರುಗಳು ಮಾತ್ರ ಇಂತಹ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ. ಆದರೆ ಇದುವರೆವಿಗೂ ಇಲ್ಲಿ ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗದೆ ಇರುವುದರಿಂದ ಪ್ರಾಂಶುಪಾಲರ ಹುದ್ದೆಗಳು ಇರುವುದಿಲ್ಲ.<br>ಉಪನ್ಯಾಸಕರು ಇರುವ ಕಾಲೇಜುಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ. |
| ಈ | ಕನಿಷ್ಠ ಹತ್ತು ವರ್ಷಗಳ ಕಾಲ ತಾತ್ಕಾಲಿಕವಾಗಿ ಸೇವೆ ಪೂರೈಸಿರುವ ಉಪನ್ಯಾಸಕರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; | ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿ 10 ವರ್ಷಕ್ಕೂ ಹೆಚ್ಚು ಅವಧಿಯಿಂದ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರು ತಮ್ಮನ್ನು ಸೇವಾ ಸಕ್ರಮಗೊಳಿಸಲು ಕೋರುತ್ತಿದ್ದಾರೆ. ಈ ಕುರಿತಂತೆ ಪರಿಶೀಲಿಸಿ, ವರದಿ ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 35 ಟಿಪಿಯು 2013 ದಿನಾಂಕ:29-05-2015ರಲ್ಲಿ |
| ಉ | ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು? | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆರವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿಯು ದಿನಾಂಕ:04-05-2016ರಂದು ಸಭೆ ಸೇರಿ ನಿರ್ಣಯಿಸಿರುವ ನಡವಳಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಇಂತಹ ಅರೆಕಾಲಿಕ ಅಥವಾ ತಾತ್ಕಾಲಿಕ ಉಪನ್ಯಾಸಕರು ಅನುದಾನಿತ ಹುದ್ದೆಗಳೆದುರು ನೇಮಕಗೊಂಡಿಲ್ಲ, ಈ ಹುದ್ದೆಗಳು ಸರ್ಕಾರದಿಂದ ಮಂಜೂರಾಗಿಲ್ಲ, ಆಡಳಿತ ಮಂಡಳಿಯು ಸ್ವಂತ ವಿವೇಚನೆ ಮೇರೆಗೆ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಂಡಿರುತ್ತಾರೆ, ನೇಮಕಾತಿ ಮಾಡುವ ಪೂರ್ವದಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ಮತ್ತು ಮೀಸಲಾತಿ ನಿಯಮಗಳನ್ನು ಪಾಲಿಸದೇ ಸದರಿ ನೇಮಕಾತಿಗಳು ನಡೆದಿದೆ ಎಂದು ಸದರಿ ನಡವಳಿಯಲ್ಲಿ ಅಭಿಪ್ರಾಯಪಟ್ಟಿರುತ್ತಾರೆ. 118 ತಾತ್ಕಾಲಿಕ ಉಪನ್ಯಾಸಕರನ್ನು ಸೇವಾ ಸಕ್ರಮಾತಿಗೊಳಿಸಲು ಅವಕಾಶವಿರುವುದಿಲ್ಲವೆಂದು ಸಮಿತಿಯು ಅಭಿಪ್ರಾಯಪಟ್ಟಿದೆ. ಈ ಪ್ರಕರಣವನ್ನು ಸಚಿವ ಸಂಪುಟದ ಅವಗಾಹನೆಗೆ ಮಂಡಿಸಲಾಗಿ, ದಿನಾಂಕ:31-01-2018ರ ಸಭೆಯಲ್ಲಿ ಸಚಿವ ಸಂಪುಟವು ಈ ಪ್ರಕರಣವನ್ನು ಶಾಶ್ವತವಾಗಿ ಮುಕ್ತಾಯಗೊಳಿಸಲು ತೀರ್ಮಾನಿಸಿದೆ. |

ಸಂಖ್ಯೆ: ಇಡಿ 182 ಡಿಜಿಡಬ್ಲ್ಯೂ 2018

(ಎನ್.ಮಹೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.